Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

23.09.2026 / 18.40 hrs

---

ಮುಖ್ಯಾಂಶಗಳು

- ಕೇಂದ್ರ ಸರ್ಕಾರ ಬರ ಘೋಷಣೆಗಿರುವ ನಿಯಮಗಳನ್ನು ಸಡಿಲಿಸುವಂತೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ವಿಧಾನಸಭೆಯಲ್ಲಿ ಮನವಿ
- ಶಾಸಕ ಯಶವಂತ ರಾಯಗೌಡ ಪಾಟೀಲ್ ರಾಜೀನಾಮೆ ಅಂಗೀಕಾರ ಮಾಡಿಲ್ಲ ; ಸಭಾಧ್ಯಕ್ಷ ಜಿ.ಎಸ್.ಪಾಟೀಲ್ ಸ್ಪಷ್ಟನೆ
- ವಿಮೆ ವಂಚನೆ ಪ್ರಕರಣಗಳ ತನಿಖೆಗೆ ವಿಶೇಷ ತನಿಖಾ ತಂಡ ರಚಿಸಿ ಸರ್ಕಾರ ಆದೇಶ
- ರಾಜ್ಯದ ಆರ್ಥಿಕ ಸ್ಥಿತಿಗತಿಗಳ ಕುರಿತು ಶ್ವೇತಪತ್ರ ಹೊರಡಿಸುವಂತೆ ಬಿಜೆಪಿ ಆಗ್ರಹ
- ತೆಲಂಗಾಣದ ಜುರಾಲಾ ಯೋಜನೆಗೆ ಕೃಷ್ಣಾನದಿಯಿಂದ ಮೂರು ಟಿಎಂಸಿ ನೀರು ಬಿಡುಗಡೆಗೆ ರಾಜ್ಯ ಸರ್ಕಾರ ಒಪ್ಪಿಗೆ

---

ರಾಜ್ಯದಲ್ಲಿ ಬರ ಪರಿಸ್ಥಿತಿಯನ್ನು ಪರಿಣಾಮಕಾರಿಯಾಗಿ ಎದುರಿಸಲು ಕೇಂದ್ರ ಸರ್ಕಾರ ಬರ ಘೋಷಣೆಗಿರುವ ನಿಯಮಗಳನ್ನು ಸಡಿಲಿಸಿ ಅಗತ್ಯ ಆರ್ಥಿಕ ನೆರವು ನೀಡಬೇಕು ಎಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ.

ಈಗಾಗಲೇ ಈ ಕುರಿತಂತೆ ಕೇಂದ್ರಕ್ಕೆ ಪತ್ರ ಬರೆಯಲಾಗಿದೆ. ಬರ ಪರಿಸ್ಥಿತಿಯ ವಾಸ್ತಾವಂಶಗಳನ್ನು ಕೇಂದ್ರದ ಗಮನಕ್ಕೆ ತಂದು ಸಂಕಷ್ಟದಲ್ಲಿರುವ ರೈತರಿಗೆ ಹೆಚ್ಚಿನ ನೆರವು ದೊರೆಯುವಂತೆ ಮನವಿ ಮಾಡಲಾಗಿದೆ ಎಂದು ಹೇಳಿದ್ದಾರೆ.

ಕೇಂದ್ರ ಸರ್ಕಾರ ರಾಜ್ಯದ ಪರಿಸ್ಥಿತಿಯನ್ನು ವಿಶೇಷವಾಗಿ ಪರಿಗಣಿಸಿ ಎನ್‌ಡಿಆರ್‌ಎಫ್ ನಿಯಮಗಳನ್ನು ಸಡಿಲಿಸಬೇಕು ಎಂದು ಒತ್ತಾಯಿಸಿದ್ದಾರೆ. ರೈತರು ಹಾಗೂ ಜನರ ಸಂಕಷ್ಟಕ್ಕೆ ಸ್ಪಂದಿಸಲು ರಾಜ್ಯ ಸರ್ಕಾರ ಬದ್ಧವಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

---

ತಮ್ಮ ಕ್ಷೇತ್ರವನ್ನು ಬರ ಪೀಡಿತ ಎಂದು ಘೋಷಿಸದ ಹಿನ್ನೆಲೆಯಲ್ಲಿ ಶಾಸಕ ಯಶವಂತ ರಾಯಗೌಡ ಪಾಟೀಲ್, ರಾಜೀನಾಮೆ ನೀಡಿದ್ದಾರೆ.

ಆದರೆ ರಾಜೀನಾಮೆ ಪತ್ರ ನಿಯಮಾನುಸಾರ ಇಲ್ಲದ ಕಾರಣ ಅಂಗೀಕಾರ ಮಾಡಿಲ್ಲ ಎಂದು ಸಭಾಧ್ಯಾಕ್ಷ ಜಿ.ಎಸ್.ಪಾಟೀಲ್ ವಿಧಾನಸಭೆಯಲ್ಲಿ ಸ್ಪಷ್ಟಪಡಿಸಿದ್ದಾರೆ.

ಇದಕ್ಕೂ ಮೊದಲು ಮುಖ್ಯಮಂತ್ರಿ ಸಭಾಧ್ಯಕ್ಷರು ಸೇರಿದಂತೆ ಆಡಳಿತ ಪಕ್ಷದ ನಾಯಕರು ಯಶವಂತ ರಾಯಗೌಡ ಪಾಟೀಲ್ ಅವರ ಮನವೊಲಿಸಿದ್ದರು.

---

ಆಡಳಿತ ಪಕ್ಷದ ಶಾಸಕ ಯಶವಂತ ರಾಯಗೌಡ ಪಾಟೀಲ್ ರಾಜೀನಾಮೆ ನೀಡಲು ಮುಂದಾಗಿರುವುದು ರೈತರ ಬದುಕಿಗಾಗಿಯೇ ಹೊರತು ಪಕ್ಷಾಂತರಗೊಳ್ಳಲು ಅಲ್ಲ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಮರ್ಥಿಸಿಕೊಂಡಿದ್ದಾರೆ.

ವಿಧಾನಸಭೆಯಲ್ಲಿ ಬರ ಕುರಿತ ಚರ್ಚೆ ವೇಳೆ ಪ್ರತಿಪಕ್ಷಗಳು ಯಶವಂತರಾಯಗೌಡ ಪಾಟೀಲ್ ಅವರ ರಾಜೀನಾಮೆ ಪತ್ರದ ಪ್ರತಿಯನ್ನು ಪ್ರದರ್ಶಿಸಿ ಗದ್ದಲ ಎಬ್ಬಿಸಿದಾಗ ಮುಖ್ಯಮಂತ್ರಿ ಈ ಸಮರ್ಥನೆ ನೀಡಿದ್ದಾರೆ. ಅವರು ತಮ್ಮ ಕ್ಷೇತ್ರದ ಜನತೆಗೆ ಉತ್ತರ ನೀಡಬೇಕಾಗಿದ್ದು, ಭಾವನಾತ್ಮಕವಾಗುವುದರಲ್ಲಿ ತಪ್ಪೇನಿಲ್ಲ ಎಂದು ಅಭಿಪ್ರಾಯಪಟ್ಟಿದ್ದಾರೆ.

ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿದ್ದು, ಕೇಂದ್ರ ಸರ್ಕಾರ ಈ ಬಗ್ಗೆ ತೀರ್ಮಾನ ಕೈಗೊಳ್ಳಬೇಕಿದೆ ಎಂದು ಹೇಳಿದ್ದಾರೆ.

ಬರ ವಿಚಾರದಲ್ಲಿ ಪಕ್ಷ ಭೇದ ಮಾಡುತ್ತಿಲ್ಲ ಎಂದು ತಿಳಿಸಿದ ಅವರು, ಎಲ್ಲಿ ಮಳೆ ಬಿದ್ದಿಲ್ಲವೊ ಅಲ್ಲಿ ಮಾನದಂಡಗಳ ಅನುಸಾರ ಬರ ಘೋಷಣೆ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

---

ವಿಮಾ ಕಂಪನಿಗಳಿಗೆ ಸಲ್ಲಿಕೆಯಾಗುವ ವಂಚನೆ ಪೂರಿತ ಕ್ಲೇಮ್‌ಗಳ ಕುರಿತು ದೂರುಗಳನ್ನು ದಾಖಲಿಸಿಕೊಂಡು ತ್ವರಿತ ತನಿಖೆ ನಡೆಸಲು ಎಸ್‌ಐಟಿ ರಚಿಸಿ ಸರ್ಕಾರ ಆದೇಶ ಹೊರಡಿಸಿದೆ.

ದೇಶಾದ್ಯಂತ ರಾಜ್ಯ ಮಟ್ಟದಲ್ಲಿ ವಿಶೇಷ ತನಿಖಾ ತಂಡಗಳನ್ನು ರಚಿಸುವಂತೆ ಸುಪ್ರೀಂಕೋರ್ಟ್ ತೀರ್ಪು ನೀಡಿರುವ ಹಿನ್ನೆಲೆಯಲ್ಲಿ ಎಸ್‌ಐಟಿ ರಚಿಸಲಾಗಿದೆ ಎಂದು ಗೃಹ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ.

ತಂಡದಲ್ಲಿ ಪೊಲೀಸ್ ಮಹಾ ನಿರೀಕ್ಷಕರ ಹುದ್ದೆಯ ಅಧಿಕಾರಿಯನ್ನು ಅಧ್ಯಕ್ಷರನ್ನಾಗಿ ಹಾಗೂ ಸಿಐಡಿ ಯಿಂದ ನಾಮನಿರ್ದೇಶನಗೊಳ್ಳುವ ಪೊಲೀಸ್ ಅಧೀಕ್ಷಕರನ್ನು ಸದಸ್ಯರನ್ನಾಗಿ ನೇಮಿಸಲಾಗಿದೆ.

ಓರ್ವ ಉಪ ಪೊಲೀಸ್ ಅಧೀಕ್ಷಕ, ಮೂವರು ಇನ್ಸ್‌ಪೆಕ್ಟರ್‌ಗಳು ತಂಡದ ಸದಸ್ಯರಾಗಿರಲಿದ್ದಾರೆ. ವಿಮಾ ಕಂಪನಿಗಳಿಂದ ಸ್ವೀಕರಿಸುವ ಎಲ್ಲಾ ವಂಚನೆ ದೂರುಗಳನ್ನು ಎಸ್‌ಐಟಿ ಸಮಗ್ರವಾಗಿ ತನಿಖೆ ನಡೆಸಲಿದೆ.

---

ರಾಜ್ಯ ಸರ್ಕಾರದ ಆರ್ಥಿಕ ದುರಾಡಳಿತ ಹಾಗೂ ರೈತರಿಗೆ ಪರಿಹಾರ ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಹಣ ಒದಗಿಸುವಲ್ಲಿನ ವೈಫಲ್ಯ ಖಂಡಿಸಿ ಬಿಜೆಪಿ ನಾಳೆ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ನಡೆಸಲು ನಿರ್ಧರಿಸಿದೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತೆರಿಗೆದಾರರ ಹಣವನ್ನು ಸರಿಯಾಗಿ ನಿರ್ವಹಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ದೂರಿದ್ದಾರೆ.

ರೈತರು, ಗುತ್ತಿಗೆದಾರರು, ಸಾರಿಗೆ ನಿಗಮಗಳು ಹಾಗೂ ಅತಿಥಿ ಶಿಕ್ಷಕರಿಗೆ ಪಾವತಿಸಬೇಕಾದ ಬಾಕಿ ಹಣವನ್ನು ಉಳಿಸಿಕೊಂಡಿದೆ ಎಂದು ಆರೋಪಿಸಿದ್ದಾರೆ. ರಾಜ್ಯದ ಆರ್ಥಿಕ ಸ್ಥಿತಿಗತಿಗಳ ಕುರಿತು ಶ್ವೇತಪತ್ರ ಹೊರಡಿಸುವಂತೆ ಆಗ್ರಹಿಸಿದ್ದಾರೆ.

---

ಬಿಜೆಪಿ ವಿವಿಧ ರಾಜ್ಯ ಉಸ್ತುವಾರಿ ಹಾಗೂ ಸಹ ಉಸ್ತುವಾರಿಗಳನ್ನು ಬದಲಾವಣೆ ಮಾಡಿದೆ. ರಾಜ್ಯ ಬಿಜೆಪಿ ಉಸ್ತುವಾರಿಯನ್ನಾಗಿ ಉತ್ತರಪ್ರದೇಶ ಮೂಲದ ಹರೀಶ್ ದ್ವಿವೇದಿ ಅವರನ್ನು ನೇಮಿಸಲಾಗಿದೆ.

ಸಹ ಉಸ್ತುವಾರಿಯಾಗಿ ತೆಲಂಗಾಣ ಮೂಲದ ಡಾ.ಕಸಂ ವೆಂಕಟೇಶ್ವರಲು ಅವರನ್ನು ನೇಮಕ ಮಾಡಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಿತಿನ್ ನಬಿನ್ ಆದೇಶ ಹೊರಡಿಸಿದ್ದಾರೆ. ಈ ಹಿಂದಿನ ಉಸ್ತುವಾರಿ ರಾಧಾ ಮೋಹನ ದಾಸ್ ಅವರ ಅವಧಿ ಮುಗಿದ ಹಿನ್ನೆಲೆಯಲ್ಲಿ ಉಸ್ತುವಾರಿಗಳ ಬದಲಾವಣೆ ಮಾಡಲಾಗಿದೆ.

---

ತೆಲಂಗಾಣದ ಜುರಾಲಾ ಯೋಜನೆಗೆ ಕೃಷ್ಣಾ ನದಿಯ ನೀರನ್ನು ಬಿಡುಗಡೆ ಮಾಡಲು ರಾಜ್ಯ ಸರ್ಕಾರ ಇಂದು ಒಪ್ಪಿಗೆ ಸೂಚಿಸಿದೆ.

ತೆಲಂಗಾಣ ಸರ್ಕಾರದ ಮನವಿಯ ಮೇರೆಗೆ ಮೆಹಬೂಬ್ ನಗರ ಜಿಲ್ಲೆಯಲ್ಲಿರುವ ಬೆಳೆಗಳನ್ನು ರಕ್ಷಿಸುವ ಉದ್ದೇಶದಿಂದ ಕೃಷ್ಣಾ ನದಿಗೆ ಅಡ್ಡಲಾಗಿ ಇರುವ ನಾರಾಯಣಪುರ ಅಣೆಕಟ್ಟೆನಿಂದ

ಜುರಲಾ ಯೋಜನೆಗೆ ಹಂತ ಹಂತವಾಗಿ ಮೂರು ಟಿಎಂಸಿ ನೀರನ್ನು ಬಿಡುಗಡೆ ಮಾಡಲು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಒಪ್ಪಿಗೆ ನೀಡಿದ್ದಾರೆ.

ತೆಲಂಗಾಣ ಮನವಿಯನ್ನು ಪುರಸ್ಕರಿಸಿರುವುದಕ್ಕೆ ಮುಖ್ಯಮಂತ್ರಿ ರೇವಂತ್ ರೆಡ್ಡಿ ರಾಜ್ಯ ಸರ್ಕಾರಕ್ಕೆ ಧನ್ಯವಾದ ಸಲ್ಲಿಸಿದ್ದಾರೆ.

---

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸಾರ್ವಜನಿಕ ಸೇವೆಯಲ್ಲಿ ೨೫ ವರ್ಷ ಪೂರ್ಣಗೊಳಿಸಿದ ಹಿನ್ನೆಲೆಯಲ್ಲಿ ದೇಶಾದ್ಯಂತ 'ಸೇವಾ ಸಂಕಲ್ಪ ಅಭಿಯಾನ' ನಡೆಯುತ್ತಿದೆ.

ಅದರ ಭಾಗವಾಗಿ ಹಲವು ವಲಯಗಳಲ್ಲಿ ಕೈಗೊಂಡ ಮಹತ್ವದ ಸುಧಾರಣೆಗಳ ಕುರಿತ ಸರಣಿಯನ್ನು ಆಕಾಶವಾಣಿ ಪ್ರಸಾರ ಮಾಡುತ್ತಿದೆ. ಇಂದಿನ ಆವೃತ್ತಿಯಲ್ಲಿ ವ್ಯವಹಾರ ಸುಲಭತೆ ಕುರಿತು ಒಂದು ನೋಟ ಇಲ್ಲಿದೆ.

೨೦೧೪ರಲ್ಲಿ ಜಾಗತಿಕ ವ್ಯವಹಾರ ಸುಲಭತೆ ಸೂಚ್ಯಂಕದಲ್ಲಿ ೧೪೨ನೇ ಸ್ಥಾನದಲ್ಲಿದ್ದ ಭಾರತ, ಕ್ರಾಂತಿಕಾರಿ ಸುಧಾರಣೆಗಳ ಮೂಲಕ ೨೦೨೦ರ ವೇಳೆಗೆ ೬೩ನೇ ಸ್ಥಾನಕ್ಕೇರುವ ಮೂಲಕ ಐತಿಹಾಸಿಕ ಪ್ರಗತಿ ಸಾಧಿಸಿದೆ.

ಆತ್ಮ ನಿರ್ಭರ ಭಾರತದಲ್ಲಿ ಮೆಕ್ ಇನ್ ಇಂಡಿಯಾ ಮೂಲಕ ಕೇಂದ್ರ ಸರ್ಕಾರ ವ್ಯವಹಾರದ ಸುಲಭತೆಯಿಂದ ರಫ್ತು ಕ್ಷೇತ್ರದಲ್ಲಿ ಸಾಧನೆ ಮಾಡಿದೆ ಎಂದು ಹೂಡಿಕೆ ಸಲಹೆಗಾರ ಶರಣ್ ಸಿ ಪಾಟೀಲ್ ಅಭಿಪ್ರಾಯಪಟ್ಟಿದ್ದಾರೆ.

ಧ್ವನಿ : ಶರಣ್ ಸಿ ಪಾಟೀಲ್ (ಹೂಡಿಕೆ ಸಲಹೆಗಾರರು ಮತ್ತು ಹಣಕಾಸು ತಜ್ಞರು)

---

ದೇಶದ ಋಣವನ್ನು ಸಂದಾಯ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದು ಪದ್ಮಶ್ರೀ ಪುರಸ್ಕೃತ ಎನ್ಎಎಲ್‌ನ ನಿವೃತ್ತ ವಿಜ್ಞಾನಿ ಡಾ.ಶುಭಾ ವೆಂಕಟೇಶ್ ಅಯ್ಯಂಗಾರ್ ತಿಳಿಸಿದ್ದಾರೆ.

ಆಕಾಶವಾಣಿ ಬೆಂಗಳೂರು ಇಂದು ಹಮ್ಮಿಕೊಂಡಿದ್ದ ಅಭಿಯಂತರರ ದಿನಾಚರಣೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಮಾತನಾಡಿದ ಅವರು, ವಿಜ್ಞಾನಿಯಾಗಿ ತಮ್ಮ ನಾಲ್ಕು ದಶಕಗಳಿಗೂ ಮೀರಿದ ಅನುಭವಗಳನ್ನು ಹಂಚಿಕೊಂಡರು. ತಮ್ಮ ಸಾಧನೆಗೆ ನೀರೆರೆದ ಹೆತ್ತವರು ಹಾಗೂ ಡಾ.ಎಚ್.ನರಸಿಂಹಯ್ಯ ಸೇರಿದಂತೆ ಹಲವರನ್ನು ಸ್ಮರಿಸಿದರು.

ಧ್ವನಿ : ಡಾ.ಶುಭಾ ವೆಂಕಟೇಶ್ ಅಯ್ಯಂಗಾರ್

ಈ ಸಂದರ್ಭದಲ್ಲಿ ಮಾತನಾಡಿದ ಬೆಂಗಳೂರು ಆಕಾಶವಾಣಿಯ ಮಹಾ ನಿರ್ದೇಶಕ ಪಿ.ಸಂಜೀವ್ ಮಾತನಾಡಿ, ವಿಶ್ವೇಶ್ವರಯ್ಯ ಅವರ ವಿಶೇಷ ಸಾಧನೆಗಳನ್ನು ವಿವರಿಸಿದರು. ನಾವೆಲ್ಲರೂ ನಮ್ಮೊಳಗಿನ ಅಭಿಯಂತರರನ್ನು ಎಚ್ಚರಗೊಳಿಸಿಕೊಳ್ಳಬೇಕೆಂದು ಕರೆ ನೀಡಿದರು. ಈ ಸಂದರ್ಭದಲ್ಲಿ ಕಾರ್ಯಕ್ರಮ ಆಡಳಿತ, ಇಂಜಿನಿಯರಿಂಗ್ ಹಾಗೂ ಸುದ್ದಿ ವಿಭಾಗದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

---

ರಾಜ್ಯದ ವಿವಿಧೆಡೆ ಇಂದು ಪೌರ ಕಾರ್ಮಿಕರ ದಿನಾಚಾರಣೆಯನ್ನು ಆಚರಿಸಲಾಯಿತು.

ಸ್ವಚ್ಛತೆ ಹಾಗೂ ಆರೋಗ್ಯಕರ ಪರಿಸರ ಕಾಪಾಡುವಲ್ಲಿ ಪೌರ ಕಾರ್ಮಿಕರ ಸೇವೆ ಅತ್ಯಂತ ಮಹತ್ವದ್ದಾಗಿದ್ದು, ಅವರ ಆರೋಗ್ಯ, ಸುರಕ್ಷತೆ ಹಾಗೂ ಕುಟುಂಬದ ಕಲ್ಯಾಣಕ್ಕೂ ಸಮಾನ ಆದ್ಯತೆ ನೀಡಬೇಕು ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ತಿಳಿಸಿದ್ದಾರೆ.

ಬಳ್ಳಾರಿಯಲ್ಲಿ ಕಾರ್ಯಕ್ರಮ ಉದ್ಘಾಟಿಸಿದ ಜಿಲ್ಲಾಧಿಕಾರಿ ಕೆ.ನಾಗೇಂದ್ರ ಪ್ರಸಾದ್, ನಿವೇಶನ ಅಗತ್ಯವಿರುವ ಎಲ್ಲ ಪೌರಕಾರ್ಮಿಕರಿಗೆ ನಿವೇಶನ ನೀಡಲು, ಸರ್ಕಾರ ಸೂಚಿಸಿದೆ ಎಂದು ತಿಳಿಸಿದ್ದಾರೆ.

ನಗರದ ಸ್ವಚ್ಛತೆಗಾಗಿ ಅಹೋರಾತ್ರಿ ಶ್ರಮಿಸುವ ಪೌರಕಾರ್ಮಿಕರ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡುವ ಮೂಲಕ ಉಜ್ವಲ ಭವಿಷ್ಯ ರೂಪಿಸಲು ಆದ್ಯತೆ ನೀಡಬೇಕು ಎಂದು ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ತಿಳಿಸಿದ್ದಾರೆ.

ಬೆಂಗಳೂರಿನ ಉತ್ತರ ನಗರ ಪಾಲಿಕೆಯ ಬ್ಯಾಟರಾಯಪುರ ವಿಧಾನಸಭಾ ಕ್ಷೇತ್ರದಲ್ಲಿ ತ್ಯಾಜ್ಯದಿಂದ ಸ್ವಾತಂತ್ರ್ಯ ಅಭಿಯಾನದ ಅಂಗವಾಗಿ ಸ್ವಚ್ಛತಾ ಕಾರ್ಯಾಚರಣೆಗೆ ಚಾಲನೆ ನೀಡಲಾಯಿತು. ಈ ವೇಳೆ ಸ್ವಚ್ಛತಾ ಕಾರ್ಯಾಚರಣೆಗೆ ೧೪ ಟ್ರ್ಯಾಕ್ಟರ್, ಒಂದು ಜೆಸಿಬಿ, ಒಂದು ಕಸ ತೆರವು ಯಂತ್ರವನ್ನು ನಿಯೋಜಿಸಲಾಗಿತ್ತು.

___________ ಮುಕ್ತಾಯ __________